ಕರ್ನಾಟಕ ಸರ್ಕಾರ

ಸಂ: ಸಿಆಸುಇ 16 ಹೆಚ್‌ಹೆಚ್‌ಎಲ್ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 09.04.2019

## ಅ ಧಿ ಸೂ ಚ ನೆ

ಭಾರತ ಚುನಾವಣಾ ಆಯೋಗವು ಲೋಕಸಭೆಗೆ ಸಾರ್ವತ್ರಿಕ ಚುನಾವಣೆ 2019ನ್ನು ಘೋಷಿಸಿದ್ದು, ಕರ್ನಾಟಕದಲ್ಲಿ ಮೊದಲ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ದಿನಾಂಕ: 18.04.2019 ರ ಗುರುವಾರದಂದು ಹಾಗೂ ಇನ್ನುಳಿದ 14 ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತದಲ್ಲಿ ಚುನಾವಣೆಯನ್ನು ದಿನಾಂಕ: 23.04.2019 ರ ಮಂಗಳವಾರದಂದು ನಡೆಸುತ್ತಿದೆ.

ಸದರಿ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವಂತಹ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಆಯಾ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಒಳಗೊಂಡಂತೆ ದಿನಾಂಕ: 18.04.2019 ಮತ್ತು ದಿನಾಂಕ: 23.04.2019 ರಂದು ನಡೆಯುವ ಚುನಾವಣೆಗೆ ಕೆಳಗಿನ ಅಂಕಣದಲ್ಲಿ ನಮೂದಿಸಿರುವ ಆಯಾ ಚುನಾವಣಾ ಕ್ಷೇತ್ರಗಳಿಗೆ ಸೀಮಿತಗೊಳಿಸಿ ಸಾರ್ವತ್ರಿಕ ರಜೆಯನ್ನು ಘೋಷಿಸಿದೆ.

ಲೋಕಸಭಾ ಕ್ಷೇತ್ರಗಳ ಅರ್ಹ ಮತದಾರರಾಗಿರುವ ಎಲ್ಲಾ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರೆ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುಂತೆ ಪ್ರಜಾಪ್ರತಿನಿಧಿ ಕಾಯ್ದೆ 1951 ಕಲಂ 135 ಬಿ ಅಡಿಯಲ್ಲಿನ ಎಲ್ಲಾ ಉಪಬಂಧಗಳಿಗೆ ಒಳಪಟ್ಟು ವೇತನ ಸಹಿತ ರಜೆ ನೀಡಲು ಈ ಮೂಲಕ ಆದೇಶಿಸಿದೆ.

ದಿನಾಂಕ: 18.04.2019 ಮತ್ತು 23.04.2019 ರ ಸಾರ್ವತ್ರಿಕ ರಜೆಯನ್ನು Negotiable Instrument Act 1881 ರ ಪ್ರಕಾರವು ಸಹ ಘೋಷಿಸಿದೆ.

ಈ ರಜೆಯು ತುರ್ತು ಸೇವೆಗಳಿಗೆ ಅನ್ವಯಿಸುವುದಿಲ್ಲ. ಆದಾಗ್ಯೂ ಕೂಡ ತುರ್ತು ಸೇವೆಯಡಿ ಕೆಲಸ ಮಾಡುವ ನೌಕರರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡತಕ್ಕದ್ದು.

ದಿನಾಂಕ: 18.04.2019 ಹಾಗೂ ದಿನಾಂಕ: 23.04.2019 ರಂದು ಚುನಾವಣೆ ನಡೆಯಲಿರುವ ಲೋಕಸಭಾ ಕ್ಷೇತ್ರಗಳ ವಿವರಗಳನ್ನು ಕೆಳಗಿನ ಅಂಕಣದಲ್ಲಿ ನೀಡಲಾಗಿದೆ.



Scanned by CamScanner

| ಕ್ರಮ ಸಂ | ಮೊದಲ ಹಂತದಲ್ಲಿ ದಿನಾಂಕ 18.04.2019 ರಂದು ನಡೆಯಲಿರುವ ಲೋಕಸಭಾ ಚುನಾವಣಾ ಕ್ಷೇತ್ರಗಳ ಹೆಸರು | ಕ್ರಮ ಸಂ | ಎರಡನೇ ಹಂತದಲ್ಲಿ ದಿನಾಂಕ 23.04.2019 ರಂದು ನಡೆಯಲಿರುವ ಲೋಕಸಭಾ ಚುನಾವಣಾ ಕ್ಷೇತ್ರಗಳ ಹೆಸರು |
|---|---|---|---|
| 1 | 15- ಉಡುಪಿ-ಚಿಕ್ಕಮಗಳೂರು | 1 | 1-ಚಿಕ್ಕೋಡಿ |
| 2 | 16-ಹಾಸನ | 2 | 2-ಬೆಳಗಾವಿ |
| 3 | 17-ದಕ್ಷಿಣ ಕನ್ನಡ | 3 | 3-ಬಾಗಲಕೋಟೆ |
| 4 | 18-ಚಿತ್ರದುರ್ಗ | 4 | 4-ಬಿಜಾಪುರ |
| 5 | 19-ತುಮಕೂರು | 5 | 4-ಕಲಬರ್ಗಿ |
| 6 | 20-ಮಂಡ್ಯ | 6 | 6-ರಾಯಚೂರು |
| 7 | 21-ಮೈಸೂರು | 7 | 7-ಬೀದರ್ |
| 8 | 22-ಚಾಮರಾಜನಗರ | 8 | 8-ಕೊಪ್ಪಳ |
| 9 | 23-ಬೆಂಗಳೂರು ಗ್ರಾಮಾಂತರ | 9 | 9-ಬಳ್ಳಾರಿ |
| 10 | 24-ಬೆಂಗಳೂರು ಉತ್ತರ | 10 | 10-ಹಾವೇರಿ |
| 11 | 25- ಬೆಂಗಳೂರು ಕೇಂದ್ರ | 11 | 11-ಧಾರವಾಡ |
| 12 | 26-ಬೆಂಗಳೂರು ದಕ್ಷಿಣ | 12 | 12-ಉತ್ತರ ಕನ್ನಡ |
| 13 | 27-ಚಿಕ್ಕಬಳ್ಳಾಪುರ | 13 | 13-ದಾವಣಗೆರೆ |
| 14 | 28-ಕೋಲಾರ | 14 | 14-ಶಿವಮೊಗ್ಗ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ),
ಸಿಆಸುಇ ಇಲಾಖೆ (ರಾಜ್ಯ ಶಿಷ್ಟಾಚಾರ)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ವಿಶೇಷ ರಾಜ್ಯಪತ್ರದಲ್ಲಿ (Extra –ordinary Gazette ) ಪ್ರಕಟಿಸಲು ಮತ್ತು ಮುದ್ರಿಸಿದ 250 ಪ್ರತಿಗಳನ್ನು ಸಿಆಸುಇ (ಸಾಮಾನ್ಯ-ಎ) ಶಾಖೆಗೆ ಒದಗಿಸಲು ಕೋರಿದೆ.

.....3

Scanned by CamScanner

ಪ್ರತಿಗಳು:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ಮತ್ತು ಪದನಿಮಿತ್ತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಆಸುಇ(ಚುನಾವಣೆಗಳು)
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು,
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
8. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
9. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
10. ರಾಜ್ಯದ ಮುಖ್ಯ ಚುನಾವಣಾಧಿಕಾರಿಯವರು, ಬೆಂಗಳೂರು.
11. ಪ್ರಾದೇಶಿಕ ಆಯುಕ್ತರುಗಳು, ಬೆಂಗಳೂರು, ಮೈಸೂರು, ಕಲಬುರಗಿ, ಬೆಳಗಾವಿ
12. ಎಲ್ಲಾ ಜಿಲ್ಲಾಧಿಕಾರಿಗಳಿಗೆ,
13. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್,
14. ಎಲ್ಲಾ ಇಲಾಖಾ ಮುಖ್ಯಸ್ಥರು,
15. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು,
16. ಅಸಿಸ್ಟೆಂಟ್ ಜನರಲ್ ಮ್ಯಾನೇಜರ್, ಭಾರತೀಯ ರಿಜರ್ವ್ ಬ್ಯಾಂಕ್, ಚೀಫ್ ಜನರಲ್ ಮ್ಯಾನೇಜರ್ ಸೆಕ್ಷನ್, ನೃಪತುಂಗ ರಸ್ತೆ, ಬೆಂಗಳೂರು.
17. ವ್ಯವಸ್ಥಾಪಕರು, ಭಾರತೀಯ ಜೀವ ವಿಮಾ ನಿಗಮ, ಒಎಸ್ ಡಿಪಾರ್ಟ್‌ಮೆಂಟ್, ಜೀವನ್ ಪ್ರಕಾಶ್ ಬಿಲ್ಡಿಂಗ್, ಜಯಚಾಮರಾಜೇಂದ್ರ ರಸ್ತೆ, ಬೆಂಗಳೂರು.
18. ಸಭಾಧ್ಯಕ್ಷರು / ಉಪ ಸಭಾಧ್ಯಕ್ಷರು – ಕರ್ನಾಟಕ ವಿಧಾನಸಭೆ ಇವರ ಆಪ್ತ ಕಾರ್ಯದರ್ಶಿಗಳು
19. ಸಭಾಪತಿಗಳು / ಉಪಸಭಾಪತಿಗಳು – ಕರ್ನಾಟಕ ವಿಧಾನಪರಿಷತ್ತು ಇವರ ಆಪ್ತ ಕಾರ್ಯದರ್ಶಿಗಳು
20. ಮುಖ್ಯ ಸಚೇತಕರು, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು ಇವರ ಆಪ್ತ ಕಾರ್ಯದರ್ಶಿಗಳು
21. ಕರ್ನಾಟಕ ವಿಧಾನಸಭೆ / ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರುಗಳ ಆಪ್ತ ಕಾರ್ಯದರ್ಶಿಗಳು
22. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.

. . . . 4

Scanned by CamScanner